ಕರ್ನಾಟಕ ಸರ್ಕಾರ
(ಕಂದಾಯ ಇಲಾಖೆ)
ತಹಶೀಲ್ದಾರವರ ನ್ಯಾಯಾಲಯ ಕೂಡ್ಲಿಗಿ

ಸಂ/ಕಂ/ಪಹಣಿ:ವಿವಾದ/38/2014-15. ದಿನಾಂಕ: 08-06-2016.

| ವಾದಿಗಳು | ಪ್ರತಿವಾದಿಗಳು |
|---|---|
| ಸಿ.ಜೆ.ಮಂಜುನಾಥ ತಂದೆ ಲೇಟ್ ಚನ್ನಬಸವನಗೌಡ<br>ಅಮ್ಮನಕೇರಿ ಗ್ರಾಮ<br>ಕೂಡ್ಲಿಗಿ ತಾಲೂಕು | ಕಂದಾಯ ಪರಿವೀಕ್ಷಕರು<br>ಕೂಡ್ಲಿಗಿ |
| ಕೂಡ್ಲಿಗಿ ತಾಲೂಕು ಅಮ್ಮನಕೇರಿ ಗ್ರಾಮದ ಸನಂ 213ಎ/1. ವಿಸ್ತೀರ್ಣ1-48. ಎಕ್ರೆ ಜಮೀನನ್ನು ಪಾಲು ವಿಭಾಗದ ಪತ್ರ ಪ್ರಕಾರ ಹಕ್ಕು ಬದಲಾವಣೆ ಬಗ್ಗೆ. | |

ಪ್ರಸ್ತಾವನೆ:

ಕೂಡ್ಲಿಗಿ ತಾಲೂಕು ಅಮ್ಮನಕೇರಿ ಗ್ರಾಮದ ಸನಂ 213ಎ/1. ವಿಸ್ತೀರ್ಣ 1-48. ಎಕ್ರೆ ಜಮೀನನ್ನು ಸದರಿ ಗ್ರಾಮದ ಸಿ.ಜೆ.ಮಂಜುನಾಥ ತಂದೆ ಲೇಟ್ ಚನ್ನಬಸವನಗೌಡ ಇವರು ಪಾಲು ವಿಭಾಗದ ಪತ್ರ ಪ್ರಕಾರ ಹಕ್ಕು ಬದಲಾವಣೆ ಮಾಡಲು ಕೋರಿ ಅರ್ಜಿ ಸಲ್ಲಿಸಿರುತ್ತಾರೆ. ಈ ಬಗ್ಗೆ ಗ್ರಾಮಲೆಕ್ಕಿಗರು ಅಮ್ಮನಕೇರಿ ಇವರು ನಮೂನೆ-21 ರ ನೋಟಿಸನ್ನು ದಿನಾಂಕ 27-06-2014 ರಂದು ಗ್ರಾಮದಲ್ಲಿ ಪ್ರಚೂರು ಪಡಿಸಿ ಹಾಗೂ ಸಂಬಂಧಪಟ್ಟವರಿಗೆ ಜಾರಿ ಮಾಡಲಾಗಿ ಅರ್ಜಿದಾರರು ಮುದ್ರಾಂಕ ಶುಲ್ಕ ಪಾವತಿ ಮಾಡಿಲ್ಲದ ಕಾರಣ ಈ ಪ್ರಕರಣವನ್ನು ಎಂ.ಆರ್.ನಂಬರ್: 32/2013-14. ದಿನಾಂಕ 26-07-2014 ರಲ್ಲಿ ಗೈರು ಮಂಜೂರು ಮಾಡಿ ಮುಂದಿನ ಕ್ರಮಕ್ಕೆ ಈ ಕಾರ್ಯಾಲಯಕ್ಕೆ ಕಳುಹಿಸಿ ಕೊಟ್ಟಿರುತ್ತಾರೆ.

ಈ ಪ್ರಕರಣವನ್ನು ಈ ಕಾರ್ಯಾಲಯದಲ್ಲಿ ವಿಚಾರಣೆ ಮಾಡುವ ದೆಸೆಯಲ್ಲಿ ಉಭಯ ಪಕ್ಷದವರಿಗೂ ನೋಟಿಸು ನೀಡಿ ದಿನಾಂಕ 12-11-2014 ರಿಂದ 08-06-2016 ರ ವರೆಗೆ ವಿಚಾರಣೆ ಮಾಡಲಾಯಿತು.

ವಿಚಾರಣೆ ಸಮಯದಲ್ಲಿ ಅರ್ಜಿದಾರರು ಗೈರು ಹಾಜರಾಗಿರುತ್ತಾರೆ. ಅರ್ಜಿದಾರರು ಅಮ್ಮನಕೇರಿ ಗ್ರಾಮದ ಸನಂ 213ಎ/1. ವಿಸ್ತೀರ್ಣ1-48. ಎಕ್ರೆ ಜಮೀನು ಪಾಲು ವಿಭಾಗದ ಪತ್ರ ಪ್ರಕಾರ ಹಕ್ಕು ಬದಲಾವಣೆ ಮಾಡಲು ಕೋರಿ ಅರ್ಜಿ ಮಾತ್ರ ಸಲ್ಲಿಸಿದ್ದು ವಿಚಾರಣೆಗೆ ಗೈರು ಹಾಜರಾಗಿರುತ್ತಾರೆ.

ಮೇಲಿನ ಎಲ್ಲಾ ಅಂಶಗಳನ್ನು ಗಣನೆಗೆ ತೆಗೆದು ಕೊಂಡು ಸದರಿ ವಿವಾದಿತ ಜಮೀನಿನ ಕಂದಾಯ ಲೆಕ್ಕಗಳನ್ನು ಪರಿಶೀಲಿಸಿ ಅರ್ಜಿದಾರರು ವಿಚಾರಣೆಗೆ ನೋಟಿಸುಗಳು ಜಾರಿಯಾಗಿದ್ದರೂ ಹಾಜರಾಗಿ ತಮ್ಮ ಹೇಳಿಕೆಗಳನ್ನಾಗಲಿ ದಾಖಲೆಗಳನ್ನಾಗಲಿ ಸಲ್ಲಿಸಿರುವುದಿಲ್ಲ ಇದರಿಂದ ಅವರಿಗೆ ಈ ಬಗ್ಗೆ ಆಸಕ್ತಿ ಇಲ್ಲವೆಂದು ಕಂಡು ಬರುತ್ತದೆ. ಕಾರಣ ಈ ಕೆಳಗಿನಂತೆ ಆದೇಶ ಮಾಡಲಾಗಿದೆ.

-:ಆದೇಶ:-

ಮೇಲೆ ವಿವರಿಸಿದ ಸಂದರ್ಭ ವಾಸ್ತುವಾಂಶ ಮತ್ತು ಕಾರಣಗಳಿಂದ ಕೂಡ್ಲಿಗಿ ತಾಲೂಕು ಅಮ್ಮನಕೇರಿ ಗ್ರಾಮದ ಸನಂ 213ಎ/1. ವಿಸ್ತೀರ್ಣ1-48. ಎಕ್ರೆ ಜಮೀನಿನ ಅರ್ಜಿದಾರರು ವಿಚಾರಣೆಗೆ ಹಾಜರಾಗಿ ಯಾವುದೇ ಹೇಳೀಕೆಗಳನ್ನು ನೀಡಿಲ್ಲದ ಕಾರಣ ಅರ್ಜಿದಾರರ ಕೋರಿಕೆಯನ್ನು ತಳ್ಳಿಹಾಕುತ್ತಾ ಯಥಾಸ್ಥಿತಿಯಂತೆ ಮುಂದುವರೆಸಲು ಆದೇಶಿಸಿ ಈ ಪ್ರಕರಣವನ್ನು ಈ ಕಾರ್ಯಾಲಯದಲ್ಲಿ ಈ ಹಂತದಲ್ಲಿ ಮುಕ್ತಾಯಗೊಳಿಸಲು ಆದೇಶಿಸಲಾಗಿದೆ.

ಈ ಆದೇಶವನ್ನು ಹೇಳೀ ಬರೆಯಿಸಿ ಬೆರಳಚ್ಚು ಮಾಡಿಸಿ ತಪ್ಪುಗಳನ್ನು ತಿದ್ದಿ ದಿನಾಂಕ 08-06-2016 ರಂದು ತೆರೆದ ನ್ಯಾಯಾಲಯದಲ್ಲಿ ಘೋಷಿಸಲಾಯಿತು

ತಹಶೀಲ್ದಾರರು
ಕೂಡ್ಲಿಗಿ.

ಇದರ ಪ್ರತಿಯನ್ನು:

1) ಅರ್ಜಿದಾರರಾದ ಸಿ.ಜೆ.ಮಂಜುನಾಥ ತಂದೆ ಚೆನ್ನಬಸನಗೌಡ ಅಮ್ಮನಕೇರಿ ಗ್ರಾಮ ಕೂಡ್ಲಿಗಿ ತಾಲೂಕು ಇವರಿಗೆ ಕಳುಹಿಸಿ ಕೊಡಲಾಗಿದೆ.
2) ಕಂದಾಯ ಪರಿವೀಕ್ಷಕರು ಕೂಡ್ಲಿಗಿ ಇವರ ಮಾಹಿತಿಗಾಗಿ ಕಳುಹಿಸಿ ಕೊಡಲಾಗಿದೆ.
3) ಗಣಕೀಕರಣ ವಿಭಾಗ ತಾಲೂಕು ಕಛೇರಿ ಕೂಡ್ಲಿಗಿ ಇವರ ಮುಂದಿನ ಕ್ರಮಕ್ಕಾಗಿ ಕಳುಹಿಸಿ ಕೊಡಲಾಗಿದೆ.
4) ಅಪೀಲು ಅವಧಿ 60 ದಿವಸ ಇರುತ್ತದೆ.

ತಹಶೀಲ್ದಾರರ ಕಾರ್ಯಾಲಯ
ಕೂಡ್ಲಿಗಿ. ಬಳ್ಳಾರಿ ಜಿಲ್ಲೆ

ದೃಢೀಕೃತ ನಕಲು

ಶಿರಸ್ತೇದಾರರು
ತಾಲೂಕು ಕಛೇರಿ
ಕೂಡ್ಲಿಗಿ.